607

Session 148, ಕ್ರ.ಸಂ. 1

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಎಸ್. ವಿ. ಸಂಕನೂರ ಇವರು ಶೂನ್ಯ ಅವಧಿಯಲ್ಲಿ ಪ್ರಸ್ತಾಪಿಸುವ ವಿಷಯಕ್ಕೆ ಉತ್ತರ**

**ಪ್ರಸ್ತಾಪಿಸಿರುವ ವಿಷಯ:**

"ಕರ್ನಾಟಕ ರಾಜ್ಯ ಸರ್ಕಾರಿ ಎನ್.ಪಿ.ಎಸ್. ನೌಕರರ ಸಂಘ ಕಳೆದ 10 ವರ್ಷಗಳಿಂದ ಹಲವಾರು ರೀತಿಯಲ್ಲಿ ಅನೇಕ ಹೋರಾಟಗಳನ್ನು ಮಾಡಿದರೂ ಸರ್ಕಾರ ಅದಕ್ಕೆ ಸ್ಪಂದಿಸದೇ ಇರುವುದರಿಂದ ಇಂದು ನಾವು ಫ್ರೀಡಂ ಪಾರ್ಕ್ ಚಲೋ ಅಭಿಯಾನ ಪ್ರತಿಭಟನೆಯನ್ನು ಸಹಸ್ರಾರು ನೌಕರರು ಸೇರಿ ನಡೆಸಲಾಗುತ್ತಿದೆ ಎಂದು ಸಂಘದ ಅಧ್ಯಕ್ಷರು ಹೇಳಿಕೆ ನೀಡಿರುವರು.

ಎನ್.ಪಿ.ಎಸ್. ಯೋಜನೆ ಜಾರಿಗೆ ತರುವಾಗ ಸರ್ಕಾರಿ ನೌಕರರು ಈ ಯೋಜನೆಯಿಂದ ಕೋಟ್ಯಾಧಿಪತಿಗಳಾಗುತ್ತಾರೆಂಬ ಭ್ರಮೆಯನ್ನು ಮೂಡಿಸಿದ್ದು, ಆದರೆ ಇಂದು ಭಿಕ್ಷಾಧಿಪತಿಗಳಾಗುತ್ತಾರೆಂದು ಇಲ್ಲಿಯವರೆಗೆ ನಡೆಸಿದ ಹಲವಾರು ವಿಚಾರ ಸಂಕಿರಣಗಳಿಂದ ಅರ್ಥವಾಗಿರುವುದು. ಎನ್.ಪಿ.ಎಸ್. ಯೋಜನೆ ಸರ್ಕಾರಿ, ಅನುದಾನಿತ ಶಿಕ್ಷಣ ಸಂಸ್ಥೆಗಳ ಹಾಗೂ ಸ್ವಾಯತ್ತ ಸಂಸ್ಥೆಗಳ ಲಕ್ಷಾಂತರ ನಿವೃತ್ತ ನೌಕರರಿಗೆ ಹಾಗೂ ಅವರ ಕುಟುಂಬದವರಿಗೆ ಮಾರಕವಾದ ಯೋಜನೆಯಾಗಿರುವುದು. ಈ ವಿಚಾರದ ಹಿನ್ನೆಲೆಯಲ್ಲಿ ಈಗಾಗಲೇ ರಾಜಸ್ಥಾನ, ಛತ್ತೀಸಗಡ, ಜಾರ್ಖಂಡ್ ಮತ್ತು ಪಂಜಾಬ ರಾಜ್ಯಗಳಲ್ಲಿ ಎನ್.ಪಿ.ಎಸ್ ರದ್ದುಪಡಿಸಿ ಓ.ಪಿ.ಎಸ್. ಜಾರಿ ಮಾಡಿರುವರು. ಈ ಎಲ್ಲ ರಾಜ್ಯಗಳು ಕ್ರಮಕೈಗೊಂಡಂತೆ ಕರ್ನಾಟಕ ಸರ್ಕಾರವೂ ಕೂಡಾ ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶದಲ್ಲಿ ನಮ್ಮ ಸಂಘದ ಬೇಡಿಕೆ ಈಡೇರಿಸದಿದ್ದರೇ ನಾವು ಅನಿರ್ದಿಷ್ಟ ಹೋರಾಟ ನಡೆಸುವುದಾಗಿ ಸರ್ಕಾರವನ್ನು ಸಂಘದ ಅಧ್ಯಕ್ಷರು ಎಚ್ಚರಿಸಿದ್ದಾರೆ.

ಆದ್ದರಿಂದ ಎನ್.ಪಿ.ಎಸ್. ಯೋಜನೆ ಸರ್ಕಾರಿ ಮತ್ತು ಅನುದಾನಿತ ನೌಕರರಿಗೆ ಮಾರಕವಾದ ಯೋಜನೆ ಆಗಿರುವುದರಿಂದ ಇದನ್ನು ರದ್ದುಪಡಿಸಿ ಈ ಹಿಂದೆ ಇದ್ದ ಓ.ಪಿ.ಎಸ್. ಯೋಜನೆಯನ್ನು ಜಾರಿ ಮಾಡಲು ಮಾನ್ಯ ಮುಖ್ಯಮಂತ್ರಿಗಳು ಶೀಘ್ರ ಕ್ರಮಕೈಗೊಳ್ಳಲು ಒತ್ತಾಯಿಸುವೆನು".

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ಇರುವ ಸೌಲಭ್ಯಗಳ ವಿವರ ಕೆಳಕಂಡಂತಿದೆ:-

1. ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಸರ್ಕಾರದ ಆದೇಶ ಸಂಖ್ಯೆ: ಆಇ 3 4 ಪಿಇಎನ್ 2018, ದಿನಾಂಕ: 23.06.2018, ಸರ್ಕಾರದ ಆದೇಶದ ಸಂಖ್ಯೆ: ಆಇ-ಪಿಇಎನ್/264/2021, ದಿನಾಂಕ: 30.05.2022 ಮತ್ತು ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್ 149 2022, ದಿನಾಂಕ: 19.10.2022 ರನ್ವಯ ನಿವೃತ್ತಿ ಉಪದಾನ, ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯಗಳನ್ನು ದಿನಾಂಕ: 01.04.2006ರಿಂದಲೇ ಜಾರಿಗೆ ಬರುವಂತೆ ವಿಸ್ತರಿಸಿ ಆದೇಶಿಸಲಾಗಿದೆ.
2. ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ (ಎಸ್.ಪಿ.ಎಲ್) 203 ಪಿಇಎನ್ 2012 (ಪಿ) , ದಿನಾಂಕ: 18.05.2016 ಮತ್ತು ಸರ್ಕಾರದ ಆದೇಶ ಸಂ:ಆಇ 201 ಪಿಇಎನ್ 2021

ದಿನಾಂಕ:29.11.2021ರನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ನೌಕರರು ನಿವೃತ್ತರಾದರೆ/ಸೇವೆಯಲ್ಲಿರುವಾಗಲೇ ಮೃತರಾದರೆ/ರಾಜೀನಾಮೆ ನೀಡಿದ ಸಂದರ್ಭದಲ್ಲಿ ಅವರುಗಳ ಪ್ರಾನ್ ಖಾತೆಯಲ್ಲಿನ ಮೊತ್ತವನ್ನು ಈ ಕೆಳಕಂಡಂತೆ ಇತ್ಯರ್ಥಪಡಿಸಲಾಗುವುದು.

a ) ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ನಿವೃತ್ತಿ ಹೊಂದಿದ ನೌಕರರ ಪ್ರಾನ್ ಖಾತೆಯಲ್ಲಿ ರೂ. 5.00 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ನೌಕರರಿಗೆ ಪ್ರಾನ್ ಖಾತೆಯಲ್ಲಿರುವ ಸಂಪೂರ್ಣ ಮೊತ್ತವನ್ನು ಇತ್ಯರ್ಥಪಡಿಸಲಾಗುವುದು ಹಾಗೂ ಪ್ರಾನ್ ಖಾತೆಯಲ್ಲಿನ ಮೊತ್ತವು ರೂ. 5.00 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಪ್ರಾನ್ ಖಾತೆಯಲ್ಲಿರುವ 60% ಮೊತ್ತವನ್ನು ನೌಕರರು ಹಿಂಪಡೆಯಬಹುದಾಗಿದ್ದು ಉಳಿದ 40% ಮೊತ್ತವನ್ನು ಕಡ್ಡಾಯವಾಗಿ Annuity Service Provider ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬೇಕಿರುತ್ತದೆ.

b) ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ಸೇವೆಗೆ ರಾಜೀನಾಮೆ ನೀಡಿದ ನೌಕರರ ಪ್ರಾನ್ ಖಾತೆಯಲ್ಲಿ ರೂ. 2.50 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ನೌಕರರ ಪ್ರಾನ್ ಖಾತೆಯಲ್ಲಿನ ಸಂಪೂರ್ಣ ಮೊತ್ತವನ್ನು ಇತ್ಯರ್ಥಪಡಿಸಲಾಗುವುದು. ನೌಕರರ ಪ್ರಾನ್ ಖಾತೆಯಲ್ಲಿನ ಮೊತ್ತವು ರೂ. 2.50 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಶೇ. 20% ರಷ್ಟು ಮೊತ್ತವನ್ನು ನೌಕರರು ಹಿಂಪಡೆಯಬಹುದಾಗಿದ್ದು, ಉಳಿಕೆ ಶೇ. 80% ಮೊತ್ತವನ್ನು ಕಡ್ಡಾಯವಾಗಿ Annuity Service Provider ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬೇಕಿರುತ್ತದೆ.

c) ನೌಕರರು ಸೇವೆಯಲ್ಲಿರುವಾಗಲೇ ಮೃತರಾದ ಸಂದರ್ಭದಲ್ಲಿ ಪ್ರಾನ್ ಖಾತೆಯಲ್ಲಿ ರೂ. 5.00 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ, ಮೃತರ ನಾಮನಿರ್ದೇಶಿತರಿಗೆ ಸಂಪೂರ್ಣ ಮೊತ್ತವನ್ನು ಇತ್ಯರ್ಥಪಡಿಸಲಾಗುವುದು. ಪ್ರಾನ್ ಖಾತೆಯಲ್ಲಿನ ಮೊತ್ತವು 5.00 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಪ್ರಾನ್ ಖಾತೆಯಲ್ಲಿರುವ 20% ರಷ್ಟು ಮೊತ್ತವನ್ನು ಮೃತರ ನಾಮನಿರ್ದೇಶಿತರಿಗೆ ಇತ್ಯರ್ಥಪಡಿಸಲಾಗುವುದು ಹಾಗೂ 80% ರಷ್ಟು ಮೊತ್ತವು ಕಡ್ಡಾಯವಾಗಿ Annuity Service Provider ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬೇಕಿರುತ್ತದೆ.

3. ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಸರ್ಕಾರದಿಂದ ನೌಕರರ ಕುಟುಂಬಕ್ಕೆ ಈ ಕೆಳಕಂಡ ಸೌಲಭ್ಯವನ್ನು ನೀಡಲಾಗುವುದು:-

ಎನ್.ಪಿ.ಎಸ್. ನೌಕರರು ದಿನಾಂಕ: 01.04.2006 ರಂದು ಮತ್ತು ತದನಂತರ ಸೇವೆಯಲ್ಲಿರುವಾಗಲೇ ಮೃತರಾದ ಸರ್ಕಾರಿ ನೌಕರರ ಕುಟುಂಬಕ್ಕೆ ಮರಣ ಉಪದಾನವನ್ನು ಸರ್ಕಾರದ ಆದೇಶ: ಸಂಖ್ಯೆ: ಆಇ/34/ಪಿ.ಇ.ಎನ್/2018, ದಿನಾಂಕ: 23.06.2018 ಮತ್ತು ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್ 149 2022, ದಿನಾಂಕ: 19.10.2022 ರನ್ವಯ ಕುಟುಂಬ ಪಿಂಚಣಿ ಮತ್ತು ಮರಣ ಉಪದಾನ ಸೌಲಭ್ಯಗಳನ್ನು ಪಡೆಯಬಹುದು.

4 . ಎನ್.ಪಿ.ಎಸ್ ನೌಕರರಿಗೆ ಆರ್ಥಿಕವಾಗಿ ಅನುಕೂಲವಾಗಲೆಂದು Tier-1 ಪ್ರಾನ್ ಖಾತೆಯಿಂದ ಭಾಗಶಃ ಮೊತ್ತವನ್ನು ಹಿಂಪಡೆಯಲು ಸರ್ಕಾರದ ಆದೇಶ ಸಂ: FD (SPL) 69 PEN 2016 ದಿನಾಂಕ:26.06.2018ರಲ್ಲಿ ಆದೇಶಿಸಲಾಗಿದೆ. ಸದರಿ ಆದೇಶದ ಅನ್ವಯ 3ವರ್ಷದ ಸೇವೆಯನ್ನು ಪೂರೈಸಿದ ಎನ್.ಪಿ.ಎಸ್ ನೌಕರನ ವಂತಿಗೆಯ ಶೇ. 25% ಮೊತ್ತವನ್ನು (ಹೂಡಿಕೆ ಮೇಲಿನ ಆದಾಯವನ್ನು ಹೊರತುಪಡಿಸಿ) ಕೆಳಕಾಣಿಸಿದ ಸಂದರ್ಭಗಳಲ್ಲಿ ಮಾತ್ರ ಹಿಂಪಡೆಯಬಹುದಾಗಿರುತ್ತದೆ:-

1. ಮಕ್ಕಳ ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ
2. ಮಕ್ಕಳ ಮದುವೆಯ ಸಂಬಂಧ
3. ಗೃಹ ನಿರ್ಮಾಣ/ ಖರೀದಿ ಸಂಬಂಧ
4. ವೈದ್ಯಕೀಯ ಕಾರಣ ನಿಮಿತ್ತ
5. ನೌಕರರ ವೃತ್ತಿ ಕೌಶಲತೆ ಹೆಚ್ಚಿಸಿಕೊಳ್ಳಲು ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ

ಈ ರೀತಿ ಸೇವಾ ಅವಧಿಯಲ್ಲಿ ಮೂರು ಬಾರಿ ಭಾಗಶಃ ಹಣ ಹಿಂಪಡೆಯಲು ಅವಕಾಶವಿರುತ್ತದೆ.

607

5. ಎನ್.ಪಿ.ಎಸ್. ನೌಕರರಿ ಹೆಚ್ಚಿನ ಉಳಿತಾಯ ಮಾಡಲು ಇಚ್ಛಿಸಿದಲ್ಲಿ ಟಯರ್-II ಖಾತೆಯನ್ನು ತೆರೆಯಲು ಸರ್ಕಾರದ ಆದೇಶ ಸಂಖ್ಯೆ: ಆಇ 141 ಪಿಇಎನ್ 2020, ದಿನಾಂಕ: 10.08.2021ರಲ್ಲಿ ಅವಕಾಶ ಕಲ್ಪಿಸಲಾಗಿದೆ.

6. ಸರ್ಕಾರದ ಆದೇಶ ಸಂಖ್ಯೆ: ಆಇ 181 ಪಿಇಎನ್ 2020, ದಿನಾಂಕ: 06.12.2021ರಲ್ಲಿ ಎನ್.ಪಿ.ಎಸ್. ನೌಕರರಿಗೆ ಪಿಂಚಣಿ ನಿಧಿ ಮತ್ತು ಹೂಡಿಕೆ ಮಾದರಿಯ ಯಾವುದಾದರು ಒಂದು ಪಿಂಚಣಿ ನಿಧಿ ವ್ಯವಸ್ಥಾಪಕರನ್ನು ಆಯ್ಕೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

<u>ಸಂಖ್ಯೆ: ಆಇ-ಪಿಇಎನ್/359/2022</u>

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ